155-72-6

(6)
(10)

06/03/2025

# ಕರ್ನಾಟಕ ವಿಧಾನ ಪರಿಷತ್ತು

-

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಐವನ್ 'ಡಿ'ಸೋಜಾ, ಇವರು ನಿಯಮ 72 ರಡಿ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ವೆನ್‌ಲಾಕ್ ಆಸ್ಪತ್ರೆ ಮತ್ತು ಲೇಡಿಗೋಶನ್ ಆಸ್ಪತ್ರೆಗಳನ್ನು ವಿಭಾಗೀಯ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸಿ, ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ, ಸುಮಾರು 8 ಜಿಲ್ಲೆಗಳಿಗೆ ಕೇಂದ್ರುವನ್ನಾಗಿ ಮಾರ್ಪಡಿಸಬೇಕೆನ್ನುವ ಬಗ್ಗೆ:**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:**

ದಕ್ಷಿಣ ಕನ್ನಡ ಜಿಲ್ಲೆಯ ವೆನ್‌ಲಾಕ್ ಜಿಲ್ಲಾ ಆಸ್ಪತ್ರೆಯಲ್ಲಿ IPHS ಮಾನದಂಡಗಳಂತೆ ಹಾಗೂ ಅಗತ್ಯಕ್ಕೆ ತಕ್ಕಂತೆ ಸರ್ಕಾರವು ಎಲ್ಲಾ ರೀತಿಯ ಮೂಲಭೂತ ಸೌಕರ್ಯ ಹಾಗೂ ಮಾನವ ಸಂಪನ್ಮೂಲಗಳನ್ನು ಒದಗಿಸುತ್ತಾ ಬಂದಿದೆ.

ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯ ವೆನ್‌ಲಾಕ್ ಜಿಲ್ಲಾ ಆಸ್ಪತ್ರೆಯು 905 ಹಾಸಿಗೆಗಳ ಸಾಮರ್ಥ್ಯ ಹೊಂದಿದ್ದು ಹಾಗೂ ಲೇಡಿಗೋಶನ್ ಆಸ್ಪತ್ರೆಯು 272 ಹಾಸಿಗೆಗಳ ಸಾಮರ್ಥ್ಯ ಹೊಂದಿದೆ. ಮುಂದುವರೆದು 50 ಬೆಡ್‌ಗಳ Critical care block ಮಂಜೂರಾಗಿದ್ದು, ಕಟ್ಟಡ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಲೇಡಿಗೋಶನ್ ಆಸ್ಪತ್ರೆ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಯಾಗಿ ಸ್ವತಂತ್ರವಾಗಿ ಕಾರ್ಯಾಚರಿಸುತ್ತಿದೆ.

ಜಿಲ್ಲಾ ವೆನ್‌ಲಾಕ್ ಆಸ್ಪತ್ರೆಯು ಖಾಸಗಿ ಸಹಭಾಗಿತ್ವದಲ್ಲಿ ಕೆ.ಎಂ.ಸಿ ವೈದ್ಯಕೀಯ ಕಾಲೇಜು ಆಸ್ಪತ್ರೆಯೊಂದಿಗೆ ಒಡಂಬಡಿಕೆಯನ್ನು ಮಾಡಿಕೊಂಡಿದ್ದು, ಸಾರ್ವಜನಿಕರಿಗೆ ಸೇವೆಯನ್ನು ನೀಡಲಾಗುತ್ತಿದೆ. ಪ್ರಸ್ತುತ ಆಸ್ಪತ್ರೆಯಲ್ಲಿ ಸುಮಾರು 700 ಸಿಬ್ಬಂದಿಗಳು (ವೈದ್ಯಕೀಯ, ಅರೆವೈದ್ಯಕೀಯ, ಕಚೇರಿ ಸಿಬ್ಬಂದಿಗಳು ಖಾಯಂ, ಗುತ್ತಿಗೆ ಮತ್ತು ಹೊರಗುತ್ತಿಗೆ ಒಳಗೊಂಡಂತೆ) ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ.

ಮಂಗಳೂರು ಸ್ಮಾರ್ಟ್‌ಸಿಟಿ ವತಿಯಿಂದ ನಿರ್ಮಾಣಗೊಂಡ ಹೊಸ ಸರ್ಜಿಕಲ್ ಬ್ಲಾಕ್ ಕಟ್ಟಡದಲ್ಲಿ 10Modular OT ಗಳು ಮತ್ತು 180 ಬೆಡ್‌ಗಳಿರುವ ಹೊಸ ಸರ್ಜಿಕಲ್ ಬ್ಲಾಕ್ ಕಟ್ಟಡ ನಿರ್ಮಾಣಗೊಂಡಿದ್ದು. ಈ ಆಸ್ಪತ್ರೆಯಲ್ಲಿ ಡಯಾಲಿಸಿಸ್ ವಿಭಾಗವು ನೆಫ್ರೊಪ್ಲಸ್ ಸಂಸ್ಥೆಯ ವತಿಯಿಂದ ಕಾರ್ಯ ನಿರ್ವಹಿಸುತ್ತಿದ್ದು, 235 ರೋಗಿಗಳು ಡಯಾಲಿಸಿಸ್ ಚಿಕಿತ್ಸೆ ಪಡೆಯುತ್ತಿದ್ದಾರೆ.

ವೆನ್‌ಲಾಕ್ ಜಿಲ್ಲಾ ಆಸ್ಪತ್ರೆಯು ರಿಜನಲ್ ಬ್ಲಡ್ ಟ್ರಾನ್ಸ್‌ಫ್ಯೂಷನ್ ಕೇಂದ್ರುವನ್ನು ಹೊಂದಿರುತ್ತದೆ. ವೆನ್‌ಲಾಕ್ ಜಿಲ್ಲಾ ಆಸ್ಪತ್ರೆಯಲ್ಲಿ DRTB Centre ಹಾಗೂ ಸಿಬಿನ್ಯಾಟ್ ವಿಭಾಗವು ಯಶಸ್ವಿಯಾಗಿ ಕಾರ್ಯಾಚರಿಸುತ್ತಿದೆ.ಹೊಸ ಸರ್ಜಿಕಲ್ ಬ್ಲಾಕ್‌ನ ತಳ ಅಂತಸ್ತಿನಲ್ಲಿ ಕೆಎಂಸಿ ವತಿಯಿಂದ ಕ್ಯಾಥ್‌ಲ್ಯಾಬ್ ನಿರ್ಮಾಣ ಪ್ರಗತಿಯಲ್ಲಿದೆ.

ಮುಂದುವರೆದು ಇನ್‌ಫೋಸಿಸ್ ಫೌಂಡೇಶನ್ ವತಿಯಿಂದ 200 ಹಾಸಿಗೆಗಳ ಸಾಮರ್ಥ್ಯದ ರೀಜನಲ್ ಅಡ್ವಾನ್ಸ್ಡ್ ಪೀಡಿಯಾಟ್ರಿಕ್ ಕೇರ್ ಸೆಂಟರ್ (ಆರ್‌ಎಪಿಸಿಸಿ) ಕಾರ್ಯ ನಿರ್ವಹಿಸುತ್ತಿದ್ದು, ಮಕ್ಕಳಿಗೆ ಉನ್ನತ ಮಟ್ಟದ ಚಿಕಿತ್ಸೆಯನ್ನು ನೀಡಲಾಗುತ್ತಿದೆ.

ಆರೋಗ್ಯ ಇಲಾಖೆಯಲ್ಲಿ ಜಿಲ್ಲಾ ಆಸ್ಪತ್ರೆಯನ್ನು ವಿಭಾಗೀಯ ಮಟ್ಟದ ಆಸ್ಪತ್ರೆಯನ್ನಾಗಿ ಘೋಷಿಸುವ ಯಾವುದೇ ರೀತಿಯ ಕಾರ್ಯಕ್ರಮಗಳಾಗಲಿ ಅಥವಾ ಮಾರ್ಗಸೂಚಿಗಳಾಗಲಿ ಇರುವುದಿಲ್ಲ. ಆದುದರಿಂದ, ದಕ್ಷಿಣ ಕನ್ನಡ ಜಿಲ್ಲೆಯ ವೆನ್‌ಲಾಕ್ ಜಿಲ್ಲಾ ಆಸ್ಪತ್ರೆಯನ್ನು ಈ ರೀತಿ ವಿಭಾಗೀಯ ಮಟ್ಟದ ಆಸ್ಪತ್ರೆ ಘೋಷಿಸಲು ಬರುವುದಿಲ್ಲ. ಮುಂದುವರೆದು, ಈಗಾಗಲೇ ಅಗತ್ಯಕ್ಕೆ ತಕ್ಕಂತೆ ಎಲ್ಲಾ ಸೌಕರ್ಯಗಳನ್ನು ಒದಗಿಸುತ್ತಾ ಇರುವುದರಿಂದ ಈ ರೀತಿ ವಿಭಾಗೀಯ ಮಟ್ಟದ ಆಸ್ಪತ್ರೆ ಘೋಷಿಸುವ ಪ್ರಯೋಜನೆ ಕಾಣುವುದಿಲ್ಲ.

ಸಂಖ್ಯೆ: ಆಕುಕ 08 ಎಸ್‌ಬಿವಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು